1018 (1226) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಕಳೆದ ಒಂದು ವರ್ಷದಲ್ಲಿ ಬೀದರ್ ಜಿಲ್ಲೆಯಲ್ಲಿ ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ,

ಆ) ಇದಕ್ಕಾಗಿ ಜಿಲ್ಲೆಯ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ಬಿಡುಗಡೆ ಮಾಡಲಾದ ಹಣದ ಮೊತ್ತವೆಷ್ಟು, ಈ ಪೈಕಿ ಇಲ್ಲಿಯವರೆವಿಗೆ ಖರ್ಚು ಮಾಡಲಾಗಿರುವ ಹಣವೆಷ್ಟು,

ಇ) ಈ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

ಅ) ಯೋಜನೆಯನ್ನು 2007ರ ಫೆಬ್ರವರಿ 4ನೇ ವಾರದಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ

ಆ) ಅನ್ವಯಿಸುವುದಿಲ್ಲ

ಇ) ಪರಿಣಿತ ಸಂಸ್ಥೆಗಳಿಂದ ಕಾರ್ಯಕ್ರಮ ಅನುಷ್ಠಾನದ ಮಧ್ಯಂತರದಲ್ಲಿ ಮೌಲ್ಯಮಾಪನ ಮಾಡಲಾಗುವುದು, ಅಲ್ಲದೇ ಕಾಲಕಾಲಕ್ಕೆ ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ಮತ್ತು ಸರ್ಕಾರದ ಮಟ್ಟದಿಂದ ಪರಿವೀಕ್ಷಣೆ ನಡೆಸಲಾಗುವುದು

1019 (1227) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಬೀದರ್ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್/ ಇಲಾಖೆಯ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಕಿರಿಯ ಇಂಜಿನಿಯರ್, ಸಹಾಯಕ ಇಂಜಿನಿಯರ್ ಹಾಗೂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಸಂಖ್ಯೆ ಎಷ್ಟು, ಇವರು ಯಾವ ಯಾವ ಸ್ಥಳಗಳಲ್ಲಿ ಎಷ್ಟೆಷ್ಟು ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ,